ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

"ಸಕಾಲ" ಇಲಾಖೆಯ ಕಾರ್ಯವ್ಯಾಪ್ತಿ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

71 (195) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸಕಾಲ ಇಲಾಖೆಯ ಕೆಲಸ ಕಾರ್ಯಗಳೇನು ;

(ಆ) ಸಾರ್ವಜನಿಕರಿಗೆ ಸಕಾಲ ಇಲಾಖೆಯಿಂದ ಯಾವ ರೀತಿ ಉಪಯೋಗವಾಗುತ್ತಿದೆ ; (ವಿವರಗಳನ್ನು ನೀಡುವುದು)

(ಇ) ಆಡಳಿತದಲ್ಲಿ ಚುರುಕು ಉಂಟಾಗುವಂತೆ ಮಾಡಲು ಈ ಇಲಾಖೆಯಿಂದ ಯಾವ ರೀತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ? (ಕಳೆದ ಎರಡು ವರ್ಷಗಳಲ್ಲಿ ಆಗಿರುವ ಪ್ರಗತಿಯ ವಿವರ ನೀಡುವುದು)